Generated by Foxit PDF Creator © Foxit Software
http://www.foxitsoftware.com For evaluation only.



# ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗ,

5ನೇ ಮಹಡಿ, ವಿಶ್ವೇಶ್ವರಯ್ಯ ಮುಖ್ಯ ಗೋಪುರ,

ಡಾ|| ಬಿ.ಆರ್. ಅಂಬೇಡ್ಕರ್ ವೀಧಿ, ಬೆಂಗಳೂರು - 560 001.

ದೂರವಾಣಿ : 22864204, 22863400

ಫ್ಯಾಕ್ಸ್: 22863282.

ವೆಬ್‌ಸೈಟ್ : www.karmin.in

## ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗದ ಚಟುವಟಿಕೆಗಳ ವಿವರ

### 1. ರಚನೆ:

ಕರ್ನಾಟಕ ರಾಜ್ಯ ಅಲಸಂಖ್ಯಾತರ ಆಯೋಗವನ್ನು 1983ನೇ ವರ್ಷದಲ್ಲಿ ರಚಿಸಲಾಯಿತು. ಆಯೋಗದ ಅಧ್ಯಕ್ಷರು ಹಾಗೂ ಸದಸ್ಯರುಗಳ ನೇಮಕಾತಿಯನ್ನು ಸರ್ಕಾರ ಕಾಲಕಾಲಕ್ಕೆ ಮಾಡಿದೆ. 1994ನೇ ವರ್ಷದಲ್ಲಿ ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗ ಅಧಿನಿಯಮವನ್ನು ಸರ್ಕಾರವು ಅಧಿನಿಯಮಿಸಿದೆ. ಆ ತರುವಾಯ ಸದರಿ ಅಧಿನಿಯಮದ ಮೇರೆಗೆ ಆಯೋಗವನ್ನು ರಚಿಸಲಾಗುತ್ತಿದೆ. ಆಯೋಗದ ಅವಧಿಯು ಸರ್ಕಾರದ ಇಚ್ಛೆಗೊಳಪಟ್ಟು ಮೂರು ವರ್ಷಗಳವರೆಗೆ ಇರುತ್ತದೆ.

### 2. ಆಯೋಗದ ಮುಖ್ಯ ಪ್ರಕಾರ್ಯಗಳು ಈ ಕೆಳಕಂಡಂತಿರುತ್ತವೆ

ಎ) ಸಂವಿಧಾನದಲ್ಲಿ ಮತ್ತು ಅಲ್ಪಸಂಖ್ಯಾತರ ವರ್ಗಗಳ ಸಂರಕ್ಷಣೆಗಾಗಿ ರಾಜ್ಯ ವಿಧಾನಮಂಡಳವು ಅಂಗೀಕರಿಸಿದ ಕಾನೂನುಗಳಲ್ಲಿ ಕಲ್ಪಿಸಲಾಗಿರುವ ವಿವಿಧ ರಕ್ಷಣಾ ಕ್ರಮಗಳ ಬಗ್ಗೆ ಕಾರ್ಯನಿರ್ವಹಣೆಯನ್ನು ಪರಿಶೀಲಿಸುವುದು.

ಬಿ) ಎಲ್ಲಾ ರಕ್ಷಣ ಕ್ರಮಗಳ ಪರಿಣಾಮಕಾರಿಯಾದ ಅನುಷ್ಠಾನ ಮತ್ತು ಜಾರಿಗೊಳಿಸುವಿಕೆಯನ್ನು ಖಚಿತ ಪಡಿಸಿಕೊಳ್ಳುವ ದೃಷ್ಟಿಯಿಂದ ಶಿಫಾರಸು ಮಾಡುವುದು.

ಸಿ)ಸಂವಿಧಾನದಲ್ಲಿ, ರಾಜ್ಯ ವಿಧಾನಮಂಡಲವೂ ಅಧಿನಿಯಮಿಸಿದ ಕಾನೂನುಗಳಲ್ಲಿ ಮತ್ತು ಅಲ್ಪಸಂಖ್ಯಾತ ವರ್ಗಗಳಿಗಾಗಿ ಸರ್ಕಾರದ ಕಾರ್ಯನೀತಿಗಳು

Generated by Foxit PDF Creator © Foxit Software
http://www.foxitsoftware.com For evaluation only.


ಮತ್ತು ಯೋಜನೆಗಳಲ್ಲಿ ಕಲ್ಪಿಸಲಾದ ರಕ್ಷಣಾ ಕ್ರಮಗಳ ಬಗೆಗಿನ ಕಾರ್ಯನಿರ್ವಾಹಣೆಯನ್ನು ಮೇಲ್ವಿಚಾರಣೆ ಮಾಡುವುದು.

ಡಿ) ಅಲ್ಪಸಂಖ್ಯಾತರ ವರ್ಗಗಳ ಬಗೆಗಿನ ತಾರತಮ್ಯವನ್ನು ತಪ್ಪಿಸುವ ಪ್ರಶ್ನೆಯ ಸಂಬಂಧದಲ್ಲಿ ಅಧ್ಯಯನ, ಸಂಶೋಧನೆ ಮತ್ತು ವಿಶ್ಲೇಷಣೆ ಮಾಡುವುದು.

ಇ)ಸರ್ಕಾರದ ಉದ್ದಿಮೆಗಳ, ಸರ್ಕಾರದ ಮತ್ತು ಅರೆ ಸರ್ಕಾರಿ ನಿಕಾಯ ಮುಂತಾದವುಗಳ ಸೇವೆಯಲ್ಲಿ ಅಲ್ಪಸಂಖ್ಯಾತ ವರ್ಗಗಳ ಪ್ರಾತಿನಿಧ್ಯವನ್ನು ವಾಸ್ತವಿಕವಾಗಿ ನಿರ್ಧರಿಸುವುದು ಮತ್ತು ಪ್ರತಿನಿಧ್ಯವು ಸಾಕಷ್ಟಿಲ್ಲದಿದ್ದ ಸಂದರ್ಭದಲ್ಲಿ, ಅಪೇಕ್ಷಿತ ಮಟ್ಟವನ್ನು ಸಾಧಿಸುವುದಕ್ಕಾಗಿ ಮಾರ್ಗೋಪಾಯಗಳನ್ನು ಸೂಚಿಸವುದು.

ಎಫ್)ರಾಜ್ಯದಲ್ಲಿ ಕೋಮು ಸಾಮರಸ್ಯವನ್ನು ಖಚಿತಪಡಿಸಿಕೊಳ್ಳಲು, ನಿರ್ವಹಿಸಲು ಮತ್ತು ಉತ್ತೇಜಿಸಲು ಶಿಫಾರಸ್ಸುಗಳನ್ನು ಮಾಡುವುದು.

ಜಿ) ಗೊತ್ತುಪಡಿಸಿದ ಅವಧಿಯಲ್ಲಿ ಸರ್ಕಾರಕ್ಕೆ ನಿಯತಕಾಲಿಕ ವರದಿಗಳನ್ನು ಸಲ್ಲಿಸುವುದು.

ಹೆಚ್) ಅಲ್ಪಸಂಖ್ಯಾತರ ವರ್ಗಗಳ ಕಲ್ಯಾಣ ಮತ್ತು ಅಭಿವೃದ್ಧಿಯ ದೃಷ್ಟಿಯಿಂದ ಮುಖ್ಯವಾದುದೆಂದು ಆಯೋಗವು ಅಭಿಪ್ರಾಯಪಡುವ ಯಾವುದೇ ಇತರೆ ವಿಷಯದ ಬಗ್ಗೆ ಅಧ್ಯಯನ ನಡೆಸುವುದು ಮತ್ತು ಸೂಕ್ತ ಶಿಫಾರಸ್ಸುಗಳನ್ನು ಮಾಡುವುದು.

ಐ) ಅಲ್ಪಸಂಖ್ಯಾತರ ವರ್ಗಗಳ ಕುಂದುಕೊರತೆಗಳನ್ನು ಪರಿಗಣಿಸುವುದು ಮತ್ತು ಕಾಲಕಾಲಕ್ಕೆ ಸೂಕ್ತ ಪರಿಹಾರವನ್ನು ಸೂಚಿಸುವುದು.

ಜೆ) ಅಲ್ಪಸಂಖ್ಯಾತರ ಹಕ್ಕುಗಳ ಮತ್ತು ರಕ್ಷಣಾಕ್ರಮಗಳ ಬಗೆಗಿನ ವಂಚನೆಗೆ ಸಂಬಂಧಿಸಿದ ನಿರ್ದಿಷ್ಟ ದೂರುಗಳ ಬಗ್ಗೆ ಪರಿಶೀಲಿಸುವುದು ಮತ್ತು ಅಂಥ ವಿಷಯಗಳನ್ನು ಸೊಕ್ತ ಪ್ರಾಧಿಕಾರದ ಮುಂದೆ ತರುವುದು.

Generated by Foxit PDF Creator © Foxit Software
http://www.foxitsoftware.com For evaluation only.



## ಎನ್.ಜಿ.ಓ. ಡೈರೆಕ್ಟರಿ

ಅಲ್ಪಸಂಖ್ಯಾತರ ಸಾಮಜಿಕ ಮತ್ತು ಆರ್ಥಿಕ ಬೆಳವಣಿಗೆಗಾಗಿ ಸರ್ಕಾರೇತರ ಸಂಘ ಸಂಸ್ಥೆಗಳ/ಸ್ವಸಹಾಯ ಗುಂಪುಗಳ ಅವಶ್ಯಕತೆ ಅತಿಮುಖ್ಯವಾಗಿದೆಯೆಂದು ಅರಿತು ಅಲ್ಪಸಂಖ್ಯಾತರರ ಏಳಿಗೆಗೆ ಸರ್ಕಾರವು ರೂಪಿಸಿರುವ ಯೋಜನೆಗಳ ಅನುಷ್ಠಾನಕ್ಕೆ ಅಲ್ಪಸಂಖ್ಯಾತರ ಸರ್ಕಾರೇತರ ಸಂಘ ಸಂಸ್ಥೆಗಳ ಮತ್ತು ಅಲ್ಪಸಂಖ್ಯಾತರ ಅಯೋಗದ ನಡುವೆ ನಿಕಟ ಸಂಪರ್ಕ ಇಟ್ಟುಕೊಳ್ಳುವುದು ಸೂಕ್ತವೆಂದು ರಾಜ್ಯದಲ್ಲಿ ಇರುವ ಈ ಸಂಸ್ಥೆಗಳ ವಿಳಾಸಗಳ ಮತ್ತು ಅವರ ಚಟುವಟಿಕೆಗಳ ಬಗ್ಗೆ ಮಾಹಿತಿಯನ್ನು ಹೊಂದಿರುವ ಡೈರೆಕ್ಟರಿಯನ್ನು 05.07.08ರಂದು ಡಾ. ಮಮ್ತಾಜ್ ಅಲಿ ಖಾನ್, ಮಾನ್ಯ ಅಲ್ಪಸಂಖ್ಯಾತರ ಸಚಿವರ ಅಧ್ಯಕ್ಷತೆಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಬಿಡುಗಡೆಮಾಡಲಾಯಿತು.

3. **ಪ್ರಧಾನ ಮಂತ್ರಿಗಳ 15 ಹೊಸ ಅಂಶಗಳ ಕಾರ್ಯಕ್ರಮ**

ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಪ್ರಧಾನ ಮಂತ್ರಿಗಳ 15 ಅಂಶದ ಕಾರ್ಯಕ್ರಮದ ಉಸ್ತುವಾರಿ ಸಮಿತಿಗಳನ್ನು ರಚಿಸುವುದು. ಹಾಗೂ ಈ ಕಾರ್ಯಕ್ರಮ ಅನುಷ್ಠಾನದ ಬಗ್ಗೆ ವಿಮರ್ಶಿಸುವುದು.

****